## 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.

### ಸಿ.ಸಿ. ಸಂಃ 613/2019

| | | |
|---|---|---|
| ಸಾಕ್ಷಿಯ ಹೆಸರುಃ | ಹೊನ್ನೇಗೌಡ | ಫ್ರಾಸಾಃಃ 15 |
| ತಂದೆ ಹೆಸರುಃ | ಬಾಲಕೃಷ್ಣೇಗೌಡ | ಚಾಸಾಃಃ 16 |
| ವಯಸ್ಸುಃ | 41 ವರ್ಷ | ಪ್ರಮಾಣೀಕರಿಸಿದ<br>ದಿಃ 25/11/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಬೆಟ್ಟದಪುರ ಗ್ರಾಮ,<br>ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಚಾಸಾ–15 ಗೊತ್ತು. ಸಾಕ್ಷಿಯು ನಿಪಿ–16 ದಿಃ 22.07.2016 ರ ಸ್ಥಳ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ–16(ಬಿ)** ಎಂದು ಗುರುತಿಸಲಾಯಿತು. 8–9 ವರುಷಗಳ ಹಿಂದೆ ಸದರಿ ಸಹಿಯನ್ನು ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಮಹಜರು ಕ್ರಮ ಜರುಗಿಸಿಲ್ಲ. ನನ್ನ ಸಮಕ್ಷಮ ಯಾವುದೇ ವಾಹನವನ್ನು ಬಿಡುಗಡೆ ಗೊಳಿಸಿಲ್ಲ. ನಿಪಿ–16 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ**

ದಿಃ 22.07.2016 ರಂದು ಪೋಲೀಸರು ನನ್ನನ್ನು ಠಾಣೆಗೆ ಕರೆಸಿ ಈ ಪ್ರಕರಣದಲ್ಲಿ ಅಮಾನತ್ತು ಪಡಿಸಿಕೊಂಡಿರುವ ಬುಲೇರೋ ವಾಹನವನ್ನು ಪೋಟೋ ತೆಗೆದು ಅದರ ಮಾಲೀಕರಿಗೆ ಪಂಚನಾಮೆ ಮಾಡಿ ಬಿಡುಗಡೆ ಮಾಡಿದರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**1 ನೇ ಹೆಚ್.ಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**